**Akashvani : Bangalore**
**National Bulletin In Kannada**
**13.10.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.10.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಮೂರು ಆಫ್ರಿಕಾ ದೇಶಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಪ್ರವಾಸ

೨. ಕಾನೂನು ಕೈಗೆತ್ತಿಕೊಳ್ಳುವ ದುಷ್ಕರ್ಮಿಗಳ ವಿರುದ್ಧ ಕಠಿಣ ಕ್ರಮ- ಮಹಾರಾಷ್ಟ್ರ ಮುಖ್ಯಮಂತ್ರಿ ಎಚ್ಚರಿಕೆ

೩. ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್; ಬಾಂಗ್ಲಾ ವಿರುದ್ಧ ಭಾರತಕ್ಕೆ ೧೩೩ ರನ್‌ಗಳ ಭರ್ಜರಿ ಜಯ

೪. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಶಾರ್ಜಾದಲ್ಲಿಂದು ಭಾರತ- ಆಸ್ಟ್ರೇಲಿಯಾ ಹಣಾಹಣಿ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು, ಅಲ್ಜೀರಿಯಾ, ಮಾರಿಟಾನಿಯಾ, ಮಲಾವಿ ದೇಶಗಳಿಗೆ ಇಂದಿನಿಂದ ಒಂದು ವಾರ ಪ್ರವಾಸ ಕೈಗೊಳ್ಳಲಿದ್ದಾರೆ. ಭಾರತದ ರಾಷ್ಟ್ರಪತಿ ಒಬ್ಬರು ಈ ಮೂರು ಆಫ್ರಿಕನ್ ದೇಶಗಳಿಗೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಭಾರತ ತನ್ನ ಜಿ-೨೦ ಅಧ್ಯಕ್ಷತೆಯ ಸಂದರ್ಭದಲ್ಲಿ ಆಫ್ರಿಕನ್ ಸಮುದಾಯಗಳನ್ನು ಶಾಶ್ವತ ಸದಸ್ಯ ರಾಷ್ಟ್ರಗಳನ್ನಾಗಿ ಮಾಡಿದ ಒಂದು ವರ್ಷದಲ್ಲೇ ರಾಷ್ಟ್ರಪತಿಯವರು ಈ ಐತಿಹಾಸಿಕ ಭೇಟಿ, ನೀಡುತ್ತಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ೩ ರಾಷ್ಟ್ರಗಳ ಭೇಟಿಯ ಭಾಗವಾಗಿ ಇಂದು ಬೆಳಗ್ಗೆ ೧೦ ಗಂಟೆಗೆ ದೆಹಲಿಯಿಂದ ಅಲ್ಜೀರಿಯಾದ ರಾಜಧಾನಿ ಅಲ್ಜೀರ್ಸ್‌ಗೆ ಪ್ರಯಾಣಿಸಲಿದ್ದಾರೆ. ರಾಷ್ಟ್ರಪತಿಗಳು ಇಂದು ಸಂಜೆ ಭಾರತೀಯ ಕಾಲಮಾನ ಸುಮಾರು ೯ ಗಂಟೆಗೆ ಅಲ್ಜೀರ್ಸ್ ತಲುಪಲಿದ್ದಾರೆ. ಅಲ್ಜೀರಿಯಾದಲ್ಲಿ ಮೂರು ದಿನಗಳ ಭೇಟಿಯ ಸಮಯದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಸಹವರ್ತಿ , ಅಬ್ದೆಲ್ಮಡ್ಜಿದ್ ಟೆಬ್ಬೌನ್ ಹಾಗೂ ಇತರ ಪ್ರಮುಖ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ರಾಷ್ಟ್ರಪತಿಗಳು ಅಲ್ಜೀರಿಯಾದ ಪ್ರಮುಖ ಸಾಂಸ್ಕೃತಿಕ ಮತ್ತು ಐತಿಹಾಸಿಕ ಸ್ಥಳಗಳಾದ ಮಕಾಮ್ ಎಚಾಹಿದ್, ಹುತಾತ್ಮರ ಸ್ಮಾರಕ, ಹಮ್ಮಾ ಗಾರ್ಡನ್ ಇತ್ಯಾದಿಗಳಿಗೆ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿ ಭಾರತ-ಅಲ್ಜೀರಿಯಾ ಆರ್ಥಿಕ ವೇದಿಕೆ ಮತ್ತು ಸಿಡಿ ಅಬ್ದೆಲ್ಲಾ ವಿಜ್ಞಾನ ಮತ್ತು ತಂತ್ರಜ್ಞಾನ ಧ್ರುವ ವಿಶ್ವವಿದ್ಯಾಲಯವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಭೇಟಿಯ ಎರಡನೇ ಹಂತದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಕ್ಟೋಬರ್ ೧೬ ರಂದು ಮೌರಿಟಾನಿಯಾಗೆ ಭೇಟಿ ನೀಡಲಿದ್ದಾರೆ ಮತ್ತು ಅಂತಿಮ ಹಂತದಲ್ಲಿ ರಾಷ್ಟ್ರಪತಿ ೧೭ ರಿಂದ ೧೯ ರ ವರೆಗೆ ಮಲಾವಿಗೆ ಭೇಟಿ ನೀಡಲಿದ್ದಾರೆ. ಈ ದೇಶಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ, ರಾಷ್ಟ್ರಪತಿಗಳು, ಆ ದೇಶಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಅಲ್ಲದೆ ಅವರು ಪ್ರಮುಖ ವ್ಯಾಪಾರ ಮತ್ತು ಉದ್ಯಮದ ನಾಯಕರು ಮತ್ತು ಭಾರತೀಯ ಸಮುದಾಯದವರೊಂದಿಗೆ ಸಂವಾದ ನಡೆಸಲಿದ್ದಾರೆ. ದ್ರೌಪದಿ ಮುರ್ಮು ಅವರ ಮೂರು ರಾಷ್ಟ್ರಗಳ ಭೇಟಿಯು ಆಫ್ರಿಕಾದ ದೇಶಗಳೊಂದಿಗೆ ಭಾರತದ ಸಂಬಂಧಗಳನ್ನು ವಿಸ್ತರಿಸುವ ಮತ್ತು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದು ನಮ್ಮ ದೆಹಲಿ ಬಾತ್ಮೀದಾರರು ವರದಿ ಮಾಡಿದ್ದಾರೆ.

**<><*<><>*><>**

ಲೋಕಾಸಭಾಧ್ಯಕ್ಷ ಓಂ ಬಿರ್ಲಾ, ನೇತೃತ್ವದ ಸಂಸದೀಯ ನಿಯೋಗ, ಜಿನೆವಾದಲ್ಲಿ ನಡೆಯುವ ಅಂತರ ಸಂಸದೀಯ ಸಂಘಟನೆಯ ೧೪೯ನೇ ಸಭೆಯಲ್ಲಿ ಪಾಲ್ಗೊಳ್ಳಲಿವೆ. ಈ ಅಧಿವೇಶನ ಇಂದಿನಿಂದ ಐದು ದಿನಗಳ ಕಾಲ ನಡೆಯಲಿದೆ. ಶಾಂತಿ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ, ತಂತ್ರಜ್ಞಾನ ಹಾಗೂ ಆವಿಷ್ಕಾರಗಳ ಸಹಯೋಗ ಕುರಿತಂತೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅಧಿವೇಶನನದಲ್ಲಿ ಭಾಷಣ ಮಾಡಲಿದ್ದಾರೆ. ಇದಲ್ಲದೆ ಅವರು, ಅಂತರ ಸಂಸದೀಯ ಸಂಘಟನೆಯ ಆಡಳಿತ ಮಂಡಳಿ ಸಭೆಯಲ್ಲಿಯೂ ಪಾಲ್ಗೊಳ್ಳಲಿದ್ದಾರೆ. ಹಾಗೂ ಸೋಮವಾರ ಜಿನೆವಾದಲ್ಲಿರುವ ಭಾರತೀಯ ಸಮುದಾಯವರನ್ನು ಭೇಟಿ ಮಾಡಲಿದ್ದಾರೆ. ರಾಜ್ಯಸಭೆ ಉಪ ಸಭಾಪತಿ ಹರಿವಂಶ್ ಸಿಂಗ್ ಕೂಡ

ನಿಯೋಗದಲ್ಲಿದ್ದಾರೆ. ಅಂತರ ಸಂಸದೀಯ ಸಂಘಟನೆ ಒಟ್ಟು ೧೮೦ ಸಂಸತ್ ಸದಸ್ಯರನ್ನು ಹಾಗೂ ೧೫ ಸಹ ಸದಸ್ಯರನ್ನು ಹೊಂದಿದೆ. ಚೀನಾ, ಭಾರತ, ಇಂಡೋನೇಷಿಯಾಗಳಂತಹ ದೊಡ್ಡ ದೇಶಗಳಲ್ಲದೇ ಕಾಬೊ, ವರ್ಡೆ, ಸ್ಯಾನ್ ಮ್ಯಾರಿನೊ ಮತ್ತು ಪಲವುಗಳಂತಹ ಪುಟ್ಟ ದೇಶಗಳ ಸಂಸದರನ್ನೊಳಗೊಂಡಿದೆ.

<><*<><>*><>

ಜಾಗತಿಕ ನಾಯಕರಾಗಿ ಪ್ರಧಾನಿ ನರೇಂದ್ರ ಮೋದಿ ಅವರ ಬೆಳವಣಿಗೆಯನ್ನು ಗುರುತಿಸಿರುವ ಭಾರತ ಮೂಲದ ಅಮೆರಿಕಾ ಸುಪ್ರಸಿದ್ಧ ಪತ್ರಕರ್ತ ಫರೀದ್ ಜಕಾರಿಯಾ ಅವರು, ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿ ಸ್ಥಾಪಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ರಚನಾತ್ಮಕ ಪಾತ್ರವನ್ನು ವಹಿಸಬಹುದು ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಝಕಾರಿಯಾ ಶ್ಲಾಘಿಸಿರುವುದು, ಇದೇ ಮೊದಲೇನಲ್ಲ. ಪ್ರಧಾನಿ ಮೋದಿ ಅವರು, ಜವಾಹರಲಾಲ್ ನೆಹರು ನಂತರ "ಅತ್ಯಂತ ಪ್ರಮುಖ ಭಾರತೀಯ ಪ್ರಧಾನಿ" ಆಗಿದ್ದು "ಅತ್ಯಂತ ಶಕ್ತಿಯುತ" ಪರಂಪರೆ ಸೃಷ್ಟಿಸಿದ್ದಾರೆ ಎಂದು ಝಕಾರಿಯಾ ಈ ವರ್ಷದ ಆರಂಭದಲ್ಲಿ ಉಲ್ಲೇಖಿಸಿದ್ದರು. ಫೆಬ್ರವರಿ ೨೦೨೨ ರಲ್ಲಿ ರಷ್ಯಾ-ಉಕ್ರೇನ್ ಯುದ್ಧ ಪ್ರಾರಂಭವಾದಾಗಿನಿಂದ, ರಾಜತಾಂತ್ರಿಕತೆ ಹಾಗೂ ಸಂವಾದದ ಮೂಲಕ ಸಂಘರ್ಷಕ್ಕೆ ಪರಿಹಾರವನ್ನು ಕಂಡುಕೊಳ್ಳಲು ಉಭಯ ದೇಶಗಳು ಮುಂದಾಗಬೇಕು ಎಂದು ಪ್ರತಿಪಾದಿಸುವ ಮೂಲಕ ಭಾರತವು ತನ್ನ ಸ್ಥಿರವಾದ ನಿಲುವನ್ನು ಉಳಿಸಿಕೊಂಡಿದೆ. ಈ ವರ್ಷದ ಜುಲೈನಲ್ಲಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಭಾರತವನ್ನು ಬಲಪಡಿಸಲು ಹಾಗೂ ಉಕ್ರೇನ್‌ನಲ್ಲಿ ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸಲು ಪರಿಹಾರ ಕಂಡುಹಿಡಿಯಲು ಪ್ರಾಮಾಣಿಕ ಪ್ರಯತ್ನಗಳಿಗಾಗಿ ತಮ್ಮ "ಇಡೀ ಜೀವನವನ್ನು" ಸಮರ್ಪಿಸಿದ್ದಕ್ಕಾಗಿ ಪ್ರಧಾನಿ ಮೋದಿಯವರಿಗೆ ಧನ್ಯವಾದ ಸಲ್ಲಿಸಿದ್ದರು. ಒಂದು ತಿಂಗಳ ನಂತರ, ಅವರು ಆಗಸ್ಟ್‌ನಲ್ಲಿ ಉಕ್ರೇನ್ ರಾಜಧಾನಿ ಕೀವ್ ತೆರಳಿದ್ದಾಗ, ಪ್ರಧಾನಿ ಮೋದಿ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ಮಾತುಕತೆ ನಡೆಸಿ, ಜಾಗತಿಕ ಸಂಘರ್ಷಗಳಿಗೆ ಪರಿಹಾರ ಕಂಡುಕೊಳ್ಳಲು ಶಾಂತಿ ಮತ್ತು ಅಹಿಂಸೆಯ ಮಹತ್ವವನ್ನು ಒತ್ತಿ ಹೇಳಿದ್ದರು. ಸೆಪ್ಟೆಂಬರ್‌ನಲ್ಲಿ, ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರು ಉಕ್ರೇನ್‌ನಲ್ಲಿನ ಸಂಘರ್ಷ ಪರಿಹರಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಭಾರತ ಪಾತ್ರ ವಹಿಸಬಹುದು ಎಂದು ವಿಶ್ವಾಸ ವ್ಯಕ್ತಪಡಿಸುವ ಹಲವಾರು ವಿಶ್ವ ನಾಯಕರನ್ನು ಸೇರಿಕೊಂಡರು. ಈ ವಾರದ ಆರಂಭದಲ್ಲಿ, ಅಮೆರಿಕಾದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕಾ ರಾಷ್ಟ್ರೀಯ ಭದ್ರತಾ ಸಲಹೆಗಾರ ಮತ್ತು ವಿಶ್ವಸಂಸ್ಥೆಯ ಮಾಜಿ ರಾಯಭಾರಿ ಜಾನ್ ಬೋಲ್ಟನ್, ಪ್ರಧಾನಿ ಮೋದಿಯನ್ನು ಬಲಿಷ್ಠ ನಾಯಕ ಎಂದು ಬಣ್ಣಿಸಿದ್ದರು.

<><*<><>*><>

ಮಹಾರಾಷ್ಟ್ರದಲ್ಲಿ ಕಾನೂನು ಕೈಗೆತ್ತಿಕೊಳ್ಳುವ ದುಷ್ಕರ್ಮಿಗಳ ವಿರುದ್ಧ ಅತ್ಯಂತ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಏಕ್‌ನಾಥ್ ಶಿಂಧೆ ಎಚ್ಚರಿಕೆ ನೀಡಿದ್ದಾರೆ. ಮಾಜಿ ಸಚಿವ ಹಾಗೂ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕ್ ಅವರ ಹತ್ಯೆ ನಂತರ ಮುಖ್ಯಮಂತ್ರಿ ಶಿಂಧೆ ಈ ಹೇಳಿಕೆ ನೀಡಿದ್ದಾರೆ. ನಿನ್ನೆ ಸಂಜೆ ಮುಂಬೈನಲ್ಲಿ ಅಪರಿಚಿತ ದಾಳಿಕೋರರು ಸಿದಿಕ್ ಅವರ ಮೇಲೆ ಗುಂಡಿನ ದಾಳಿ ನಡೆಸಿ ಹತ್ಯೆ ಮಾಡಿದ್ದರು. ಈ ಘಟನೆಯನ್ನು ದುರಾದೃಷ್ಟಕರ ಎಂದು ಹೇಳಿರುವ ಏಕ್‌ನಾಥ್ ಶಿಂಧೆ, ಪ್ರಕರಣ ಸಂಬಂಧ ಇಬ್ಬರು ಶಂಕಿತರನ್ನು ಬಂಧಿಸಲಾಗಿದೆ ಎಂದು ಮಾಧ್ಯಮದವರಿಗೆ ತಿಳಿಸಿದ್ದಾರೆ. ಹತ್ಯೆ ಪ್ರಕರಣದ ವಿಚಾರಣೆ ತ್ವರಿತಗತಿಯ ನ್ಯಾಯಾಲಯದಲ್ಲಿ ನಡೆಯಲಿದೆ. ಘಟನೆಯನ್ನು ಎನ್‌ಕೌಂಟರ್ ತಜ್ಞ ದಯಾನಾಯಕ್ ತನಿಖೆ ನಡೆಸಲಿದ್ದಾರೆ ಎಂದು ಮುಖ್ಯಮಂತ್ರಿ ಘೋಷಿಸಿದ್ದಾರೆ.

<><*<><>*><>

ದೇಶದ ರಕ್ಷಣೆ ಹಾಗೂ ಅಭಿವೃದ್ಧಿಗೆ ಒತ್ತಾಸೆ ನೀಡುವ ೭೫ ಗಡಿ ಮೂಲಸೌಕರ್ಯ ಯೋಜನೆಗಳನ್ನು ನಿನ್ನೆ ಲೋಕಾರ್ಪಣೆಗೊಳಿಸಲಾಯಿತು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಗಡಿ ರಸ್ತೆ ಸಂಸ್ಥೆ, ೨ ಸಾವಿರದ ೨೩೬ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಗಡಿ ಮೂಲಸೌಕರ್ಯಗಳನ್ನು ನಿನ್ನೆ ವರ್ಚುವಲ್ ಮೂಲಕ ಉದ್ಘಾಟಿಸಿದರು. ಅಂಡಮಾನ್-ನಿಕೋಬಾರ್ ಸೇರಿದಂತೆ ೧೧ ಗಡಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಯೋಜನೆಗಳನ್ನು ನಿರ್ಮಿಸಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ೨೦೧೪ ರಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿ ನೇತೃತ್ವದ ಕೇಂದ್ರದ ಎನ್‌ಡಿಎ ಸರ್ಕಾರ, ಈಶಾನ್ಯ ರಾಜ್ಯಗಳು ಹಾಗೂ ಗಡಿ ರಾಜ್ಯಗಳಲ್ಲಿ ಮೂಲಸೌಕರ್ಯ ನಿರ್ಮಾಣಕ್ಕೆ ಒತ್ತು ನೀಡಿದೆ. ಈ ಪ್ರದೇಶಗಳಲ್ಲಿ ರಕ್ಷಣೆಯೊಂದಿಗೆ ಅಭಿವೃದ್ಧಿಗೂ ಒತ್ತು ನೀಡಲಾಗಿದೆ ಎಂದು ಹೇಳಿದರು.

<><*<><>*><>

ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆಯ ನೊಂದಣಿ ಪ್ರಕ್ರಿಯೆಗೆ ನಿನ್ನೆ ಚಾಲನೆ ನೀಡಲಾಗಿದೆ. ಈ ವರ್ಷದ ಬಜೆಟ್‌ನಲ್ಲಿ ಪ್ರಕಟಿಸಲಾದಂತಹ ಈ ಯೋಜನೆಯಡಿ ಯುವಜನತೆಗೆ ನೈಜ ವ್ಯಾಪರ ಪರಿಸರದ ಅನುಭವ ಒದಗಿಸುವ ನಿಟ್ಟಿನಲ್ಲಿ ೧೨ ತಿಂಗಳ ಪ್ರಶಿಕ್ಷಣಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ. ಯೋಜನೆಯಡಿ ೨೧ ರಿಂದ ೨೪ ವರ್ಷ ವಯೋಮಾನದ ೧ ಕೋಟಿ ಯುವ ಅಭ್ಯರ್ಥಿಗಳಿಗೆ ದೇಶದ ಪ್ರಮುಖ ೫೦೦ ಕಂಪನಿಗಳಲ್ಲಿ ಮುಂದಿನ ೫ ವರ್ಷಗಳಲ್ಲಿ ಪ್ರಶಿಕ್ಷಣ ಒದಗಿಸಲು ಉದ್ದೇಶಿಸಲಾಗಿದೆ. ಈ ಪೋರ್ಟಲ್‌ನಲ್ಲಿ ಇದುವರೆಗೆ ೧೯೩ ಕಂಪನಿಗಳು ಸುಮಾರು ೯೧ ಸಾವಿರ ಇಂಟರ್ನ್‌ಶಿಪ್ ಅವಕಾಶಗಳನ್ನು ಒದಗಿಸಿವೆ. ಸರ್ಕಾರ ಪ್ರಸಕ್ತ ಹಣಕಾಸು ವರ್ಷ ಒಟ್ಟು ೧.೨೫ ಲಕ್ಷ ಇಂಟರ್ನ್‌ಶಿಪ್ ಅವಕಾಶಗಳನ್ನು ಒದಗಿಸುವ ಗುರಿ ಹಮ್ಮಿಕೊಂಡಿದೆ. ಆನ್‌ಲೈನ್ ಪೋರ್ಟಲ್ pminternship.mca.gov.in.ಮೂಲಕ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.

<><*<><>*><>

ಹರಿಯಾಣದ ನೂತನ ಸರ್ಕಾರದ ಪ್ರಮಾಣವಚನ ಗುರುವಾರ ಪಂಚಕುಲಾದಲ್ಲಿ ನಡೆಯಲಿದೆ. ಹರಿಯಾಣದ ಮಾಜಿ ಮುಖ್ಯಮಂತ್ರಿ ಮನೋಹರ್ ಲಾಲ್ ಕಟ್ಟರ್ ನಿನ್ನೆ ಈ ವಿಷಯ ತಿಳಿಸಿದ್ದಾರೆ. ಒಟ್ಟು ೯೦ ಸ್ಥಾನಗಳನ್ನು ಹೊಂದಿರುವ ಹರಿಯಾಣ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ೪೮ ಸ್ಥಾನಗಳನ್ನು, ಕಾಂಗ್ರೆಸ್ ೩೭ ಸ್ಥಾನಗಳನ್ನು ಗಳಿಸಿವೆ.

<><*<><>*><>

ಹೈದರಾಬಾದ್‌ನಲ್ಲಿ ನಿನ್ನೆ ನಡೆದ ಭಾರತ-ಬಾಂಗ್ಲಾದೇಶ ನಡುವಿನ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಮೂರನೇ ಹಾಗು ಅಂತಿಮ ಪಂದ್ಯದಲ್ಲಿ ಭಾರತ, ಬಾಂಗ್ಲಾದೇಶವನ್ನು ೧೩೩ ರನ್‌ಗಳಿಂದ ಸೋಲಿಸಿದೆ. ಆ ಮೂಲಕ ೩ ಪಂದ್ಯಗಳ ಸರಣಿಯನ್ನು ೩-೦ ಅಂತರದಿಂದ ವಶಪಡಿಸಿಕೊಂಡು ಕ್ಲೀನ್ ಸ್ವೀಪ್ ಸಾಧಿಸಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಭಾರತ ತಂಡ, ಸಂಜು ಸ್ಯಾಮ್‌ಸನ್ ೪೭ ಎಸೆತಗಳಲ್ಲಿ ಗಳಿಸಿದ ದಾಖಲೆಯ ೧೧೧ ರನ್, ಸೂರ್ಯಕುಮಾರ್ ಯಾದವ್ ರವರ ೭೫ ರನ್ ಹಾಗೂ ಹಾರ್ದಿಕ್ ಪಾಂಡ್ಯ ಅವರ ೧೮ ಎಸೆತಗಳಲ್ಲಿ ೪೭ ರನ್ ನೆರವಿನಿಂದ ೨೯೭ ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ಕಳೆದ ವರ್ಷ ಮಂಗೋಲಿಯಾ ವಿರುದ್ಧ ನೇಪಾಳ ಗಲಿಸಿದ ಮೂರು ವಿಕೆಟ್‌ಗಳಿಗೆ ೩೧೪ ರನ್‌ಗಳ ನಂತರ ಅಂತಾರಾಷ್ಟ್ರೀಯ ಟಿ-೨೦ಯಲ್ಲಿ ಇದು ಎರಡನೇ ಅತ್ಯಧಿಕ ಇನ್ನಿಂಗ್ಸ್ ಮೊತ್ತವಾಗಿದೆ. ೨೯೮ ರನ್‌ಗಳ ಸವಾಲಿನ ಗುರಿ ಬೆನ್ನತ್ತಿದ ಬಾಂಗ್ಲಾದೇಶ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೬೪ ರನ್ ಗಳಿಸಲಷ್ಟೇ ಶಕ್ತವಾಯಿತು.

<><*<><>*><>

ಶಾರ್ಜಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆಯಲಿರುವ ಮಹಿಳಾ ಟಿ೨೦ ಕ್ರಿಕೆಟ್ ವಿಶ್ವಕಪ್‌ನ ಎ ಗುಂಪಿನ ಪಂದ್ಯದಲ್ಲಿ ಭಾರತದ ವನಿತೆಯರ ತಂಡ ಆಸ್ಟ್ರೇಲಿಯಾವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>